(ಸದನವು ಸಂಜೆ 6 ಗಂಟೆ 32 ನಿಮಿಷಕ್ಕೆ ಮುಂದೂಡಲ್ಪಟ್ಟು ನಾಳೆ ಬೆಳಿಗ್ಗೆ ದಿನಾಂಕ : 13ನೇ ಜುಲೈ – 2005 ರಂದು ಬೆಳಿಗ್ಗೆ 10.00 ಗಂಟೆಗೆ ಸಭೆ ಸೇರಲು ನಿಃಶ್ಚಯಿಸಿತು.

ಅನುಬಂಧ – I

4288 (5159) ಶ್ರೀ ಎಸ್.ಅಂಗಾರ (ಸುಳ್ಯ) :– ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಾನ್ಯ ಮುಖ್ಯಮಂತ್ರಿಗಳ, ಸಚಿವರುಗಳ, ವಿರೋಧ ಪಕ್ಷದ ನಾಯಕರುಗಳ ಮತ್ತು ಮುಖ್ಯ ಸಚೇತಕರುಗಳ ಕಛೇರಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಗುತ್ತಿಗೆಯಾಧಾರದ ನೌಕರರ ಸಂಖ್ಯೆ ಎಷ್ಟು;

ಆ) ಇವರಿಗೆ ನೀಡುತ್ತಿರುವ ಮಾಸಿಕ ವೇತನ ಹಾಗೂ ಇತರೆ ಸೌಲಭ್ಯಗಳೇನು;

ಇ) ಈ ಗುತ್ತಿಗೆಯಾಧಾರದ ನೌಕರರಿಗೆ ನೀಡುತ್ತಿರುವ ವೇತನ ಈಗಿನ ದೈನಂದಿನ ಜೀವನ ನಿರ್ವಹಣೆಗೆ ಸಾಕಾಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಸರ್ಕಾರ ಗುತ್ತಿಗೆಯಾಧಾರಾದ ಈ ನೌಕರರಿಗೆ ವೇತನ ಹೆಚ್ಚಳ ಮಾಡುವ ಮತ್ತು ಇತರೆ ಸೌಲಭ್ಯಗಳನ್ನು ಒದಗಿಸುವಲ್ಲಿ ಕೈಗೊಂಡಿರುವ ಕ್ರಮಗಳೇನು;

ಉ) ವೇತನ ಹೆಚ್ಚಳ ಹಾಗೂ ಇತರೆ ಸೌಲಭ್ಯ ನೀಡುವಂತೆ ಸರ್ಕಾರಕ್ಕೆ ಮನವಿ ಪತ್ರಗಳು ಬಂದಿದೆಯೇ?

ಶ್ರೀ ಧರ್ಮಸಿಂಗ್ (ಮುಖ್ಯಮಂತ್ರಿಗಳು) :

ಅ) ಮಾನ್ಯ ಮುಖ್ಯಮಂತ್ರಿಗಳ, ಸಚಿವರುಗಳ, ವಿರೋಧ ಪಕ್ಷದ ನಾಯಕರುಗಳ ಮತ್ತು ಮುಖ್ಯ ಸಚೇತಕರುಗಳ ಕಛೇರಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಗುತ್ತಿಗೆಯಾಧಾರದ ನೌಕರರ ಒಟ್ಟು ಸಂಖ್ಯೆ 308

ಆ) **ಸಂಚಿತ ವೇತನ**

1) ವಿಶೇಷ ಕರ್ತವ್ಯಾಧಿಕಾರಿ ರೂ.7320
2) ಸಹಾಯಕರು ರೂ.5065
3) ಶೀಘ್ರಲಿಪಿಗಾರರು ರೂ.5065
4) ಕಿರಿಯ ಸಹಾಯಕರು ರೂ.3660

5) ಬೆರಳಚ್ಚುಗಾರರು ರೂ.3660

6) ವಾಹನ ಚಾಲಕರು ರೂ.3660

7) ಗ್ರೂಪ್ ಡಿ. ರೂ.3050

ಇ) ಬಂದಿದೆ.

ಈ) ಪರಿಶೀಲನೆಯಲ್ಲಿದೆ.

ಉ) ಬಂದಿರುತ್ತದೆ.

4289 (5382) ಶ್ರೀ ಅಂಗಾರ. ಎಸ್. (ಸುಳ್ಯ) : ಮಾನ್ಯ ಪೌರಾಡಳಿತ ಹಾಗೂ ಕೆಯುಐಡಿಎಫ್‌ಸಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸುಳ್ಯ ಪಟ್ಟಣ ಪಂಚಾಯತಿ ವ್ಯಾಪ್ತಿಗೆ ಬರುವ ಸುಳ್ಯ-ಕೋಡಿಯಾಲ ಬೈಲು-ದುಗ್ಗಲಡ್ಕ ರಸ್ತೆಯ ಕಾಮಗಾರಿಯನ್ನು ಯಾರಿಗೆ ಗುತ್ತಿಗೆ ನೀಡಲಾಗಿದೆ;

ಆ) ಸದರಿ ಕಾಮಗಾರಿಯನ್ನು ಅರ್ಧದಲ್ಲಿ ನಿಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಬಂದಿದ್ದಲ್ಲಿ ಕಾಮಗಾರಿ ಅರ್ಧಕ್ಕೆ ನಿಲ್ಲಿಸಿರುವ ಗುತ್ತಿಗೆದಾರರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ;

ಈ) ಕಾಮಗಾರಿಯನ್ನು ಎಷ್ಟು ಸಮಯದಲ್ಲಿ ಪೂರ್ಣಗೊಳಿಸಲಾಗುವುದು?

ಶ್ರೀ ಎಸ್.ಆರ್. ಮೋರೆ (ಪೌರಾಡಳಿತ ಹಾಗೂ ಕೆಯುಐಡಿಎಫ್‌ಸಿ ಸಚಿವರು) :

ಅ) ಮೆ: ಚಂದ್ರಗಿರಿ ಕನ್‌ಸ್ಟ್ರಕ್ಷನ್ಸ್ ಕಂಪನಿ ಇವರಿಗೆ ನೀಡಲಾಗಿದೆ.

ಆ) ಹೌದು.

ಇ) ಗುತ್ತಿಗೆದಾರರಿಗೆ ಪಾವತಿಸಬೇಕಾದ ಬಾಕಿ ಮೊತ್ತವನ್ನು ತಡೆಹಿಡಿಯುವಂತೆ ಸೂಚಿಸಲಾಗಿದೆ.

ಈ) ಸದರಿ ಕಾಮಗಾರಿಯನ್ನು ಖುದ್ದು ಪರಿಶೀಲಿಸಿ ಸಂಬಂಧಿಸಿದ ಗುತ್ತಿಗೆದಾರರಿಂದ ಬಾಕಿ ಉಳಿದಿರುವ ಕೆಲಸವನ್ನು ಪೂರ್ಣಗೊಳಿಸಲು ಕ್ರಮ ಕೈಗೊಳ್ಳುವಂತೆ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನಗರ ನೀರು

ಸರಬರಾಜು ಮತ್ತು ಒಳಚರಂಡಿ ಮಂಡಳಿಯವರಿಗೆ ಈಗಾಗಲೇ ನಿರ್ದೇಶಿಸಿದೆ.

4290 (4951) ಶ್ರೀ ಅಪ್ಪಸಾಹೇಬ್ (ಅಪ್ಪು) ಮಲ್ಲಪ್ಪ ಪಟ್ಟಣಶೆಟ್ಟಿ (ಬಿಜಾಪುರ) : ಮಾನ್ಯ ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಶಾಲಾ-ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ವತಿಯಿಂದ ಬಸ್ ಪಾಸ್ ನೀಡುತ್ತಿರುವುದು ನಿಜವೇ;

ಆ) ಗ್ರಾಮೀಣ ಪ್ರದೇಶದಿಂದ ನಗರಕ್ಕೆ ವ್ಯಾಸಂಗಕ್ಕಾಗಿ ಪ್ರತಿ ದಿನ ಕ.ರಾ.ರ.ಸಾ.ಸಂಸ್ಥೆ ಬಸ್ಸಿನಲ್ಲಿ ಪ್ರಯಾಣಿಸುವ ವಿದ್ಯಾರ್ಥಿಗಳಿಗೆ ಅನಾನುಕೂಲ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಬಿಜಾಪುರ ಜಿಲ್ಲೆಯ ಕೆಲವು ಕ.ರಾ.ರ.ಸಾ.ಸಂಸ್ಥೆಯ ಬಸ್‌ಗಳಲ್ಲಿ ವಿದ್ಯಾರ್ಥಿಗಳ ಬಸ್‌ಪಾಸ್ ಪ್ರಯಾಣಕ್ಕೆ ನಿರಾಕರಿಸಲು ಕಾರಣವೇನು;

ಈ) ವಿದ್ಯಾರ್ಥಿಗಳಿಗೆ ಉಂಟಾಗುತ್ತಿರುವ ಅನಾನುಕೂಲವನ್ನು ತಪ್ಪಿಸಲು ಹಾಗೂ ಬಸ್‌ಗಳಲ್ಲಿ ಕೆಲವು ನಿರ್ವಾಹಕರು ಪ್ರಯಾಣಕ್ಕೆ ನಿರಾಕರಿಸುವಂತೆ ಸರ್ಕಾರ ಕೈಗೊಳ್ಳಲಿರುವ ಕ್ರಮವೇನು?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು):

ಅ) ಹೌದು.

ಆ) ಇಲ್ಲ.

ಇ) ನಿಗಮದ ನಿಯಮಾವಳಿಗನ್ವಯ ಅಂತರರಾಜ್ಯ ಮಾರ್ಗದ ಬಸ್ಸುಗಳು, ಸುವಿಹಾರಿ, ರಾಜಹಂಸ, ವೋಲ್ವೋ ಬಸ್ಸುಗಳಲ್ಲಿ ಹೊರತುಪಡಿಸಿ, ಉಳಿದ ಬಸ್ಸುಗಳಲ್ಲಿ ಪ್ರಯಾಣಿಸಲು ಅವಕಾಶವಿದೆ.

ಈ) ಪಾಸ್ ಹೊಂದಿದ ವಿದ್ಯಾರ್ಥಿಗಳಿಗೆ ಯಾವುದೇ ರೀತಿಯ ಅಡತಡೆ ಮಾಡದಂತೆ ಪ್ರಯಾಣಿಸಲು ಹಾಗೂ ಅವರೊಡನೆ ಸೌಜನ್ಯದಿಂದ ವರ್ತಿಸಲು ಸಿಬ್ಬಂದಿಗೆ ಸೂಕ್ತ ತಿಳುವಳಿಕೆ ಆದೇಶ ನೀಡಲಾಗಿದೆ. ನಿರ್ದಿಷ್ಟ ದೂರು ಬಂದಲ್ಲಿ ಸಂಬಂಧ ಪಟ್ಟವರ ಮೇಲೆ ಸೂಕ್ತ ಕ್ರಮ ಸಹ ಕೈಗೊಳ್ಳಲಾಗುತ್ತಿದೆ.

4291 (4952) ಶ್ರೀ ಅಪ್ಪಸಾಹೇಬ್(ಅಪ್ಪು) ಮಲ್ಲಪ್ಪ ಪಟ್ಟಣಶೆಟ್ಟಿ (ಬಿಜಾಪುರ) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಿಜಾಪುರ ನಗರದಲ್ಲಿ ಉಲ್ಬಣಿಸಿರುವ ಕುಡಿಯುವ ನೀರಿನ ಸಮಸ್ಯೆ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ರಾಜ್ಯ ಸರ್ಕಾರವು 1994ನೇ ಸಾಲಿನ ಜನಸಂಖ್ಯೆಗೆ ಅನುಗುಣವಾಗಿ ಯೋಜನೆಯನ್ನು ರೂಪಿಸಿದ್ದು, ನಗರದ ಜನಸಂಖ್ಯೆಯು ದಿನದಿಂದ ದಿನಕ್ಕೆ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಕುಡಿಯುವ ನೀರಿನ ಸಮಸ್ಯೆ ನಿವಾರಿಸಲು ರಾಜ್ಯ ಸರ್ಕಾರವು 2005ನೇ ಸಾಲಿನ ಜನಸಂಖ್ಯೆಗೆ ಅನುಗುಣವಾಗಿ ಹೊಸ ಯೋಜನೆ, ತಂತ್ರಜ್ಞಾನ, ಜನರೇಟರ್, ಹೆಚ್ಚಿನ ಅನುದಾನ ನೀಡಲು ಉದ್ದೇಶಿಸಿದೆಯೇ;

ಈ) ಹಾಗಿದ್ದಲ್ಲಿ ಕುಡಿಯುವ ನೀರಿನ ಸಮಸ್ಯೆಯ ಶಾಶ್ವತ ನಿವಾರಣೆಗೆ ಏನು ಕ್ರಮ ಕೈಗೊಳ್ಳಲಾಗುವುದು;

ಉ) ನಗರದ ಕುಡಿಯುವ ನೀರಿನ ಸಮಸ್ಯೆಯನ್ನು ನೀರಿನ ಸಮಸ್ಯೆಯನ್ನು ಯಾವಾಗ ನಿವಾರಿಸಲಾಗುವುದು?

ಶ್ರೀ ಧರ್ಮಸಿಂಗ್ (ಮುಖ್ಯಮಂತ್ರಿಗಳು) :

ಅ) ಹೌದು.

ಆ) ಹೌದು.

ಇ) ನೀರಿನ ಸಮಸ್ಯೆ ತುರ್ತು ನಿವಾರಣೆಗಾಗಿ 2005-06ನೇ ಸಾಲಿನ ಬರ ಪರಿಹಾರ ಕಾಯಕ್ರಮದಡಿಯಲ್ಲಿ ನಗರದಲ್ಲಿ ವಿತರಣಾ ವ್ಯವಸ್ಥೆಯ ಸುಧಾರಣೆ ಹೊಸ ಪಂಪುಗಳ ಅಳವಡಿಕೆ ಹಾಗೂ ಇನ್ನಿತರ ತುರ್ತು ರಿಪೇರಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ.

ಈ) ಹಾಲಿ ನೀರು ಸರಬರಾಜು ಯೋಜನೆಯ ಸಾಮರ್ಥ್ಯದ ಹೆಚ್ಚಳದ ಕಾಮಗಾರಿಗಳನ್ನು ಉತ್ತರ ಕರ್ನಾಟಕದ ಅಭಿವೃದ್ಧಿ ಹಣಕಾಸು ಸಂಸ್ಥೆ (ಎ.ಡಿ.ಬಿ) ಯೋಜನೆಯ ಅಡಿಯಲ್ಲಿ ಕೈಗೊಳ್ಳಲು ಉದ್ದೇಶಿಸಲಾಗಿದೆ.

ಉ) ಆದಷ್ಟು ಜಾಗ್ರತೆ ಕ್ರಮ ಕೈಗೊಳ್ಳಲಾಗುವುದು.

4292 (4953) ಶ್ರೀ ಅಪ್ಪಸಾಹೇಬ್ (ಅಪ್ಪು)ಮಲ್ಲಪ್ಪ ಪಟ್ಟಣಶೆಟ್ಟಿ (ಬಿಜಾಪುರ) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬಿಜಾಪುರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಪ್ರಾಚ್ಯವಸ್ತು ಸ್ಮಾರಕಗಳು ಮತ್ತು ಸರ್ಕಾರಿ ಜಾಗವನ್ನು ಅತಿಕ್ರಮಣ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಆ ಅತಿಕ್ರಮಣಕಾರರು ಯಾರು ಯಾರು;

ಇ) ಅವರ ವಿರುದ್ಧ ಸರ್ಕಾರ ಯಾವ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗುವುದು;

ಈ) ಪ್ರಾಚ್ಯವಸ್ತು ಸ್ಮಾರಕಗಳ ಸಂರಕ್ಷಣೆಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ?

ಉ) ಪ್ರಾಚ್ಯವಸ್ತು ಸ್ಮಾರಕಗಳನ್ನು ಅಭಿವೃದ್ಧಿಪಡಿಸಲು ಸರ್ಕಾರ ಯಾವ ಯಾವ ಯೋಜನೆಗಳನ್ನು ಹಾಕಿಕೊಂಡಿದೆ?

ಶ್ರೀ ಧರ್ಮಸಿಂಗ್ (ಮುಖ್ಯಮಂತ್ರಿಗಳು) :

ಅ) ಬಂದಿದೆ.

ಆ) ಭಾರತೀಯ ಪುರಾತತ್ವ ಸರ್ವೇಕ್ಷಣೆಯವರು ಒದಗಿಸಿರುವ ಪಟ್ಟಿಯನ್ನು ಲಗತ್ತಿಸಲಾಗಿದೆ.

ಇ) ಅತಿಕ್ರಮಣಕಾರರ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ.

ಈ) ಈ ಸ್ಮಾರಕಗಳು ರಾಷ್ಟ್ರೀಯ ಸಂರಕ್ಷಿತ ಸ್ಮಾರಕಗಳಾಗಿದ್ದು ಭಾರತೀಯ ಪುರಾತತ್ವ ಸರ್ವೇಕ್ಷಣೆ, ಧಾರವಾಡ ವಲಯ ಇವರು ಸ್ಮಾರಕಗಳ ಸಂರಕ್ಷಣೆಗಾಗಿ ಪ್ರಾಚೀನ ಸ್ಮಾರಕಗಳು ಮತ್ತು ಪುರಾತತ್ವ ನಿವೇಶನಗಳ ಅವಶೇಷಗಳು ಅಧಿನಿಯಮ 1958 ಮತ್ತು ನಿಯಮಗಳು 1959ರ ಸಕ್ಷನ್ 38ರ ಅಡಿ ಅಗತ್ಯ ಕ್ರಮಗಳನ್ನು ಕೈಗೊಂಡಿದ್ದಾರೆ. ರಾಜ್ಯ ಸರ್ಕಾರದ ಸಹಕಾರದೊಂದಿಗೆ ಒತ್ತುವರಿಯನ್ನು ತೆರವುಗೊಳಿಸಲು ಸಹ ಕ್ರಮ ಕೈಗೊಂಡಿರುತ್ತಾರೆ.

ಉ) ಈ ನಿಟ್ಟಿನಲ್ಲಿ ಸುಮಾರು 15 ಅನಧಿಕೃತ ಕಟ್ಟಡಗಳನ್ನು ಕೆಡವಿ ಹಾಕಲಾಗಿರುತ್ತದೆ. ಇದಲ್ಲದೆ ವಿವಿಧ ನ್ಯಾಯಾಲಯಗಳಲ್ಲಿ 30 ದಾವೆಗಳನ್ನು ದಾಖಲು ಮಾಡಲಾಗಿದೆ.

ಕರ್ನಾಟಕ ವಿಧಾನಸಭೆಯ ಮಾನ್ಯ ಸದಸ್ಯರಾದ ಶ್ರೀ ಅಪ್ಪಸಾಹೇಬ್ (ಅಪ್ಪು) ಮಲ್ಲಪ್ಪ ಪಟ್ಟಣಶೆಟ್ಟಿ (ಬಿಜಾಪುರ)ರವರ ಚುಕ್ಕೆ ಗುರುತ್ತಿಲ್ಲದ ಪ್ರಶ್ನೆ ಸಂಖ್ಯೆ : 4953ಕ್ಕೆ ಅನುಬಂಧ

Lift of Buildings illegally built within 300 mtr. of the monuments under Dharwad Circle, Dharwad in Bijapur (East) Range, Bijapur.

Sl. No.	Name of the Monument	Nature of Encroachment
1	All Shaheed poer Mosque	1) Rooms 2) Urinal Block 3) Water tank
2	Allahpur Gate	Houses
3	Ambar Khan	Houses
4	Badi Kaman	Krishna Dairy and Urinal Block
5	Bahumani Gate	Houses
6	Bathulla Khan's Mosque	1) Tin shed over polls 2) Urinla Block
7	Fort wall (from Mangall gate to Baumani Gate	Houses
8	Gol Gumbaz and other structures within the protected area	1) Houses at South east corner. 2) Houses at South west corner
9	Haji Hassan Saheb's tomb	1) Mosque 2) Water tank 3) Urinal Block
10	Jumma Masjid	a) Houses b) Electric polls